No. BDA/EM/EO-2/TA-3/OC/T- 89 /2019-20, Dated: 11-06-2019

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

ಬೆಂಗಳೂರು

ಅನುಸೂಚಿ–9

(ಉಪವಿಧಿ ಸಂಖ್ಯೆ: 5.5.1)

## ಸ್ವಾಧೀನಪಡಿಸಿಕೊಳ್ಳಲು ಅನುಮತಿ ಪತ್ರ

ಮಾನ್ಯ ಆಯುಕ್ತರು ರವರ ಆದೇಶ ಸಂಖ್ಯೆ: 873 ದಿನಾಂಕ 21.05.2019.

ಅರ್ಜಿದಾರರಾದ M/s Meda Eternity ರವರು ಕೋರಿರುವಂತೆ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದ ಸರ್ವೆ ನಂ 98/4ರ 10602.30 ಚಮೀ ವಿಸ್ತೀರ್ಣದಲ್ಲಿ ನಿರ್ಮಿಸಿರುವ 92 ಬಹುವಸತಿ ವಸತಿ ಘಟಕಗಳ ಕಟ್ಟಡಕ್ಕೆ ಸ್ವಾಧೀನಾನುಭವ ಪತ್ರ ಕೋರಿದ್ದು, ಈ ಕಛೇರಿಯಿಂದ ಕಟ್ಟಡ ನಕ್ಷೆಗೆ ಸಂಖ್ಯೆ: ಬೆಂಅಪ್ರಾ/ನಮ/ಅಸ/ಅಅ-2/ತಾಸ-2/ಉ/04/2016-17 ದಿನಾಂಕ: 21.05.2016ರಲ್ಲಿ ಮಂಜೂರಾತಿ ಮತ್ತು ಈ ಕಛೇರಿ ಪತ್ರ ಸಂಖ್ಯೆ: ಬೆಂಅಪ್ರಾ/ನಮ/ಅಸ/ಅಅ-2/ತಾಸ-3/ಉ/ಸಿಸಿ/ಟಿ-476/2016-17 ದಿನಾಂಕ: 15.03.2017ರಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ಪಡೆದಿರುತ್ತಾರೆ.

ನೋಂದಾಯಿತ ವಾಸ್ತು ಶಿಲ್ಪಿ/ಇಂಜಿನಿಯರ್/ಮೇಲ್ವಿಚಾರಕರು ಕಟ್ಟಡ ನಿರ್ಮಾಣಗೊಂಡ ಬಗ್ಗೆ ನೀಡಿದ ದೃಢೀಕರಣದ ಆಧಾರದ ಮೇಲೆ ಮತ್ತು ತರುವಾಯ ಕಾರ್ಯನಿರ್ವಾಹಕ ಅಭಿಯಂತರರು (ಉತ್ತರ) ಮತ್ತು ಅಭಿಯಂತರ ಅಧಿಕಾರಿ-2, ಬೆಂ.ಅ.ಪ್ರಾ ರವರು ಕಟ್ಟಡದ ತನಿಖೆ ನಡೆಸಿ ಒಪ್ಪಿದ ತನಿಖಾ ವರದಿಯು ತಲುಪಿದ್ದು, ಅದರ ಅಧಾರದಿಂದ ಮೇಲೆ ತಿಳಿಸಿದ ಸಂಖ್ಯೆ ನಿವೇಶನದಲ್ಲಿಯ ಕಟ್ಟಡಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿರುವುದು ನನಗೆ ಮನವರಿಕೆಯಾಗಿದೆ. ಆದ್ದರಿಂದ ಮೇಲ್ಕಾಣಿಸಿರವ ನೆಲ+ 01ರಿಂದ 04 ಮೇಲಂತಸ್ತುಗಳನ್ನೊಳಗೊಂಡ ಒಟ್ಟು 92 ವಸತಿ ಘಟಕಗಳ ಬಹುವಸತಿ ಕಟ್ಟಡಕ್ಕೆ ಸ್ವಾಧೀನಾನುಭವ ಪಡಿಸಿಕೊಳ್ಳಲು ಈ ಮೂಲಕ ನಾನು ಅನುಮತಿ ನೀಡಿದ್ದೇನೆ.

**ಷರತ್ತುಗಳು:–**

1. ವಾಹನ ನಿಲುಗಡೆ ಪ್ರದೇಶಕ್ಕೆ ಸಂಪೂರ್ಣ ಸುರಕ್ಷತೆಯನ್ನು ಒದಗಿಸಿ ವಾಹನ ನಿಲುಗಡೆಗೆ ಮಾತ್ರ ಉಪಯೋಗಿಸತಕ್ಕದ್ದು.
2. ಮಳೆ ನೀರು ಕೊಯ್ಲು ವ್ಯವಸ್ಥೆಯನ್ನು ಉತ್ತಮ ರೀತಿಯಿಂದ ನಿರ್ವಹಿಸಿ ಸಂಗ್ರಹಿಸಿದ ನೀರನ್ನು ಗೃಹ ಬಳಕೆಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು.
3. ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ಶುದ್ಧೀಕರಣ ಘಟಕವನ್ನು (S.T.P) ಯಾವಾಗಲೂ ಸುಸ್ಥಿತಿಯಲ್ಲಿಡುವುದು ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿ ಶೌಚಾಲಯ Gardening ಹಾಗೂ ಗಿಡಮರ, Lawnಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ Sewage ನೀರನ್ನು ಹೊರಗಡೆ ಬಿಡತಕ್ಕದ್ದಲ್ಲ.
4. ಅಭಿವೃದ್ಧಿದಾರರು ಕಟ್ಟಡ ಸ್ವಾಧೀನಪಡಿಸಿಕೊಂಡ ನಂತರ, ಬಿಬಿಎಂಪಿ/ಬಿಡಿಎ/ Statutory Bodies ಗಳು ಇನ್ನಾವುದೇ ಶುಲ್ಕಗಳನ್ನು ವಿಧಿಸಿದಲ್ಲಿ ಅದನ್ನು ಸಂದಾಯ ಮಾಡತಕ್ಕದ್ದು.
5. ಅರ್ಜಿದಾರರು ಕಟ್ಟಡಕ್ಕೆ ಬೇಕಾದ ವಿದ್ಯುಚ್ಛಕ್ತಿಯ ಪರ್ಯಾಯ ವ್ಯವಸ್ಥೆಗಾಗಿ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.
6. ಕಟ್ಟಡದ ಗುಣಮಟ್ಟ, ಸುರಕ್ಷತೆ ಹಾಗೂ ವಿನ್ಯಾಸಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯಿಂದ ಜವಾಬ್ದಾರರಾಗಿರುವುದಿಲ್ಲ. ಈ ಅಂಶಗಳ ಪೂರ್ಣ ಜವಾಬ್ದಾರಿಯು ಅಭಿವೃದ್ಧಿದಾರರದ್ದೇ ಆಗಿರುತ್ತದೆ.
7. ಅರ್ಜಿದಾರರು ನೀರು ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅವಲಂಬಿಸದೆ ನೀರಿಗಾಗಿ ತಮ್ಮ ಸ್ವಂತ ವ್ಯವಸ್ಥೆ ಮಾಡಿಕೊಳ್ಳುವುದು.
8. ಅರ್ಜಿದಾರರು ಯಾವುದೇ ರೀತಿಯ ಪ್ಲಾಸ್ಟಿಕ್, ಪೇಪರ್, ಗಾರ್ಬೇಜ್ ಇತ್ಯಾದಿ ತ್ಯಾಜ್ಯಗಳನ್ನು ಸಂಗ್ರಹಿಸಿ Drywaste ಮತ್ತು Wetwaste ಅನ್ನು ಬೇರ್ಪಡಿಸಿ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

11/6

ಆಯುಕ್ತರ ಪರವಾಗಿ

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

9. ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡದ ಪ್ರವೇಶ ದ್ವಾರದಲ್ಲಿ ಒಳಬರುವ ಹಾಗೂ ಹೊರಹೋಗುವ ವಾಹನಗಳಿಗೆ ಪ್ರತ್ಯೇಕ ವ್ಯವಸ್ಥೆಯನ್ನು ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳುವುದು.

10. ಕರ್ನಾಟಕ ಅಗ್ನಿಶಾಮಕ ಇಲಾಖೆಯವರು ನೀಡಿದ Clearance ಪತ್ರದಲ್ಲಿನ ಎಲ್ಲಾ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

11. ಅಭಿವೃದ್ಧಿದಾರರು ಯೋಜನೆಯ ಒಳಾಂಗಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಎಲ್ಲಾ ಅಗತ್ಯ ಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳತಕ್ಕದ್ದು.

12. ಅರ್ಜಿದಾರರು ಕಟ್ಟಡದ ಸ್ವಾಧೀನ್ನಾನುಭವ ಪತ್ರ ಪಡೆಯಲು ಯಾವುದೇ ತಪ್ಪು ದಾಖಲೆಗಳನ್ನೇನಾದರು ಸಲ್ಲಿಸಿರುವುದು ಕಂಡುಬಂದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ಸ್ವಾಧೀನಾನುಭವ ಪತ್ರವನ್ನು ರದ್ದುಪಡಿಸಲಾಗುವುದು ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

13. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು.

14. ಅಭಿವೃದ್ಧಿದಾರರು ಬೆಟರ್ ಮೆಂಟ್ ತೆರಿಗೆ ಪಾವತಿಸುವ ಕುರಿತು ಮಾನ್ಯ ಉಚ್ಛ ನ್ಯಾಯಾಲಯ ನೀಡಿರುವ WP ಸಂಖ್ಯೆ: 45727 - 45730/2011 (ಬೆಂ.ಅ.ಪ್ರಾ) ದಿನಾಂಕ: 03.09.2012ರ ತೀರ್ಮಾನದ ವಿರುದ್ಧ ಪ್ರಾಧಿಕಾರವು ಮೇಲ್ಮನವಿ ಸಲ್ಲಿಸಲು ತಿರ್ಮಾನಿಸಿದ್ದು, ಮೇಲ್ಮನವಿಯ ಕುರಿತು ನ್ಯಾಲಯ ನೀಡುವ ತೀರ್ಪಿಗೆ ಬದ್ಧರಾಗಿರಲು ಷರತ್ತಿಗೆ ಒಳಪಡಿಸಲಾಗಿದೆ.

116

ಆಯುಕ್ತರ ಪರವಾಗಿ
ಕಛೇರಿ ಮುದ್ರೆ ಅಧಿಕಾರಿಯ ಸಹಿ:-
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಅಭಿಯಂತರ ಸದಸ್ಯರು
ಬೆಂಗಳೂರು.

**ರವರಿಗೆ,**

M/s Meda Eternity,
No. 1569, 1st Sector, HSR Layout,
Service Road Outer Ring Road,
Bangalore – 560042.

ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರರು (ಉತ್ತರ) ರವರ ಮಾಹಿತಿಗಾಗಿ ರವಾನಿಸಲಾಗಿದೆ.